ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

**6ನೇ ಅಡ್ಡರಸ್ತೆ. ಮಲ್ಲೇಶ್ವರಂ. ಬೆಂಗಳೂರು – 560003**

*****************************************************************************

**ಸಂಖ್ಯೆ : ಗ.ಶಾ/ಎಸ್.ಎಸ್.ಎಲ್.ಸಿ/ಆ.ಅಂ.ಅಪ್/01/2019-20** **ದಿನಾಂಕ: 20.02.2020**

**– ಸುತ್ತೋಲೆ –**

**ವಿಷಯ** : ಏಪ್ರಿಲ್–2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡುವ ಬಗ್ಗೆ.

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ ಏಪ್ರಿಲ್ –2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ಶಾಲಾ ವಿದ್ಯಾರ್ಥಿಗಳ(CCERF) ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು ದಿನಾಂಕ 26.02.2020 ರಿಂದ 06.03.2020 ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು ಸೂಚಿಸಿದೆ.

1. ಮಂಡಳಿಯ ಜಾಲತಾಣ http://www.kseeb.kar.nic.in ನ ಶಾಲಾ ಲಾಗಿನ್‌ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿರುವ ತಂತ್ರಾಂಶದ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಸಿ ಆಂತರಿಕ ಅಂಕಗಳನ್ನು ಅಪ್‌ಡೇಟ್ ಮಾಡಲು ಬಳಸುವುದು.
3. ಲಾಗ್‌ಇನ್ ಆದ ನಂತರ ಮೊದಲು Internal Marks Entry ಮೇಲೆ ಕ್ಲಿಕ್ ಮಾಡಬೇಕು. ತೆರೆಯಲಾಗುವ ವೆಬ್‌ಪೇಜ್‌ನಲ್ಲಿ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು ನಮೂದಿಸಿ ಮತ್ತು ಕನಿಷ್ಟ ಶೇಕಡಾ 75 ಹಾಜರಾತಿಯನ್ನು ಹೊಂದಿರುವ ಬಗ್ಗೆ Yes ಅಥವಾ No ಎಂದು ನಮೂದಿಸಿ View ಬಟನ್ ಮೇಲೆ ಕ್ಲಿಕ್ಕಿಸುವುದು. ಆಗ ವಿದ್ಯಾರ್ಥಿಯ ಎಲ್ಲಾ ಮಾಹಿತಿಗಳು Display ಆಗುತ್ತದೆ. ಈ ಎಲ್ಲಾ ಮಾಹಿತಿಗಳು ಆಂತರಿಕ ಅಂಕಗಳನ್ನು ನಮೂದು ಮಾಡುತ್ತಿರುವ ಆ ನಿರ್ದಿಷ್ಟ ವಿದ್ಯಾರ್ಥಿಯದೇ ಎಂದು ಖಚಿತಪಡಿಸಿಕೊಂಡು ಆಂತರಿಕ ಅಂಕಗಳನ್ನು ನಮೂದಿಸುವುದು.

   3a. ಕನಿಷ್ಟ ಶೇಕಡಾ 75 ಹಾಜರಾತಿಯನ್ನು ಹೊಂದಿರುವ ಬಗ್ಗೆ Yes ಎಂದು ನಮೂದಿಸಿದ ವಿದ್ಯಾರ್ಥಿಗಳಿಗೆ ಮಾತ್ರ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಲಾಗಿದೆ. No ಎಂದು ನಮೂದಿಸಿದ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ನೀಡಿರುವುದಿಲ್ಲ. ಅಂದರೆ ಆ ವಿದ್ಯಾರ್ಥಿಯು ಮಾರ್ಚ್ ಹಾಗೂ ಜೂನ್ 2020ರ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲು ಅರ್ಹನಿರುವುದಿಲ್ಲ. ಆ ವಿದ್ಯಾರ್ಥಿಯು 2020–21ರಲ್ಲಿ ಶಾಲೆಗೆ ಮರು ನೋಂದಣಿ ಮಾಡಿಕೊಂಡು ಹಾಜರಾಗುವುದು ಎಂದರ್ಥ.
4. ವಿದ್ಯಾರ್ಥಿಯು ತೆಗೆದುಕೊಂಡಿರುವ ಭಾಷೆ ಮತ್ತು ವಿಷಯಗಳು ಹಾಗೂ ತಂತ್ರಾಂಶದಲ್ಲಿ Display ಆಗಿರುವ ಭಾಷೆ ಮತ್ತು ವಿಷಯಗಳು ಸರಿಯಾಗಿರುತ್ತದೆ ಎಂದು ಖಚಿತಪಡಿಸಿಕೊಂಡು, ಆಯಾ ಭಾಷೆ ಮತ್ತು ವಿಷಯಗಳಿಗೆ ಅನುಸಾರವಾಗಿ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಬೇಕು.
5. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಿದ ನಂತರ Print ಸೌಲಭ್ಯ ನೀಡಲಾಗಿದೆ. ವಿದ್ಯಾರ್ಥಿವಾರು ವರದಿಯ ಪ್ರಿಂಟ್ ಪಡೆಯುವುದು ಕಡ್ಡಾಯ. ಪ್ರಿಂಟ್ ಪಡೆಯದಿದ್ದಲ್ಲಿ Freeze ಆಯ್ಕೆ ತೆರೆದುಕೊಳ್ಳುವುದಿಲ್ಲ. Print Out ತೆಗೆದುಕೊಂಡು ನಮೂದಿಸಿರುವ ಅಂಕಗಳು ಸರಿಯಿದೆಯೇ ಎಂದು ಪರಿಶೀಲಿಸಬೇಕು. ಈ Printout ಗಳ ಆಧಾರದ ಮೇಲೆ ಪೋಷಕರ ಸಭೆ/ SDMC ಸಭೆಯಲ್ಲಿ ಮಗುವಿನ ಪ್ರಗತಿ ಬಗ್ಗೆ ಚರ್ಚಿಸಬಹುದಾಗಿದೆ.

6. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Freeze ಮಾಡುವುದಕ್ಕೂ ಮುಂಚೆ ವಿದ್ಯಾರ್ಥಿಯ ಆಂತರಿಕ ಅಂಕಗಳ ವರದಿಯ ಬಗೆ ವಿದ್ಯಾರ್ಥಿಯ ಪೋಷಕರಿಗೆ ಮಾಹಿತಿ ನೀಡಿ ಪ್ರತಿ ಪೋಷಕರ ಸಹಿ ಪಡೆಯುವುದು ಕಡ್ಡಾಯ.
7. ನಿಗದಿತ ಹಾಜರಾತಿಯನ್ನು ಹೊಂದಿರದ ವಿದ್ಯಾರ್ಥಿಯ ಮಾಹಿತಿಯನ್ನೂ ಸೇರಿದಂತೆ ಪ್ರತಿ ವಿದ್ಯಾರ್ಥಿಯ ಮಾಹಿತಿಯನ್ನು **Print** ತೆಗೆದು ಪರಿಶೀಲಿಸಿ ನಂತರ **Freeze** ಮಾಡಬೇಕು. Freeze ಮಾಡಿದ ನಂತರ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
8. ಭಾಷಾ ವಿಷಯಗಳಿಗೆ ವಿನಾಯಿತಿ ಪಡೆದಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ, ವಿನಾಯಿತಿ ಪಡೆದ ವಿಷಯಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಅಗತ್ಯವಿಲ್ಲ. ಈ ಆಯ್ಕೆಯನ್ನು ಸಹ ನೀಡಿರುವುದಿಲ್ಲ. ಕೆಲ ಪ್ರಕರಣಗಳಲ್ಲಿ ಪರ್ಯಾಯ ಕೋರ್ ವಿಷಯಗಳನ್ನು ಬರೆಯಲು ಅನುಮತಿ ನೀಡಲಾಗಿದ್ದು, ಈ ವಿಷಯಗಳಿಗೆ ಸಂಬಂಧಿಸಿದ ಆಂತರಿಕ ಅಂಕಗಳನ್ನು ನಮೂದಿಸಬೇಕಾಗಿದೆ.
9. ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿ Freeze ಮಾಡಿದ ನಂತರ ನಂತರ ಶಾಲೆಯ ಕ್ರೋಢೀಕೃತ ವರದಿಯನ್ನು (Consolidated Report) ಮುದ್ರಿಸಿಕೊಳ್ಳಬಹುದಾಗಿದೆ.
10. ಜೆ.ಟಿ.ಎಸ್ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಜೊತೆಯಲ್ಲೇ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸಲು ಅವಕಾಶ ನೀಡಲಾಗಿದ್ದು, ಸದರಿ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಯು ಏಪ್ರಿಲ್ ಮಾಹೆಯಲ್ಲಿ ಮುಕ್ತಾಯವಾಗುವುದರಿಂದ, ಈ ಶಾಲೆಗಳಿಗೆ ದಿ:11.04.2020 ರಿಂದ 15.04.2020 ವರಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಿದೆ.

ಆಯಾ ಶಾಲೆಯ ಮುಖ್ಯಸ್ಥರು ದಿನಾಂಕ: 06.03.2020 ರೊಳಗೆ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿಲು ಸೂಚಿಸಿದೆ. ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳ ಆಂತರಿಕ ಅಂಕಗಳನ್ನು ನಮೂದಿಸುವ ಕಾರ್ಯವನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಕ್ರಮವಹಿಸಲು ತಿಳಿಸಿದೆ.

ಕಳೆದ ವರ್ಷ ಕೆಲವು ಶಾಲೆಗಳ ಮುಖ್ಯ ಶಿಕ್ಷಕರು ಪ್ರಥಮ ಭಾಷೆಗೆ ಗರಿಷ್ಠ ಅಂಕಗಳು 25ರ ಬದಲು 20 ಎಂದು ಭಾವಿಸಿ ಅಂಕಗಳನ್ನು ನಮೂದಿಸಿರುವುದು ಮತ್ತು ಇತರ ವಿಷಯಗಳ ಅಂಕಗಳನ್ನು ತಪ್ಪಾಗಿ ನಮೂದಿಸಿ ನಂತರ ತಿದ್ದುಪಡಿಗಾಗಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಇದು ಮುಖ್ಯ ಶಿಕ್ಷಕರ ಬೇಜವಾಬ್ದಾರಿಯನ್ನು ತೋರಿಸುತ್ತಿದ್ದು, ಇಂತಹ ಪ್ರಕರಣಗಳು ಮರುಕಳಿಸಿದ್ದಲ್ಲಿ ಮುಖ್ಯ ಶಿಕ್ಷಕರು ದಂಡ ಪಾವತಿಸಬೇಕಾಗುತ್ತದೆ ಮತ್ತು ಶಿಸ್ತುಕ್ರಮಕ್ಕೆ ಒಳಗಾಗಬೇಕಾಗುತ್ತದೆ.

ಆಂತರಿಕ ಅಂಕಗಳನ್ನು ಶಾಲಾ ಹಂತದಲ್ಲಿ ಆನ್‌ಲೈನ್‌ನಲ್ಲಿ ನಮೂದು ಮಾಡುತ್ತಿರುವುದರಿಂದ ಮುಖ್ಯಶಿಕ್ಷಕರು ಎದುರಿಸಬಹುದಾದ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಸಲುವಾಗಿ ಮಂಡಳಿಯಲ್ಲಿ ದೂರವಾಣಿ ಮೂಲಕ ಸಹಾಯವಾಣಿಯನ್ನು ಆಯೋಜಿಸಲಾಗಿದೆ. ಸಹಾಯವಾಣಿ ಸಂಖ್ಯೆಗಳು–08023310075, 08023310076.

20/2/2020
(ಸುಮಂಗಲ. ವಿ)
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :
1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಶಾಲಾ ಲಾಗಿನ್ ಮುಖಾಂತರ